547 ಶ್ರೀ ಸೋಮಲಿಂಗಪ್ಪ ಎಂ.ಎಸ್. : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲ್ಲೂಕಿನ ಭತ್ತ ಬೆಳೆಗಾರರು ಅಕ್ಕಿ ಕಾರ್ಖಾನೆಗಳಿಗೆ ತಲುಪಲು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗಂಗಾವತಿ ತಾಲ್ಲೂಕಿನ ಸಿರಗುಪ್ಪ ಗ್ರಾಮದ ಮಧ್ಯೆ ಹರಿಯುವ ತುಂಗಭದ್ರಾ ನದಿಗೆ ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಸೇತುವೆ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಗಮನಕ್ಕೆ ಬಂದಿದೆ.

ಆ) ಅನುದಾನದ ಲಭ್ಯತೆಯ ಮೇರೆಗೆ ತೆಗೆದುಕೊಳ್ಳುವ ಬಗ್ಗೆ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

964 ಶ್ರೀ ವೀರಭದ್ರಪ್ಪ ಹಾಲಹರವಿ : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರದ ಸಿ.ಬಿ.ಟಿ. ಬಸ್ ನಿಲ್ದಾಣವನ್ನು ಬೆಂಗಳೂರಿನ ಶಿವಾಜಿನಗರ ಬಸ್ ನಿಲ್ದಾಣದ ಮಾದರಿಯಲ್ಲಿ ನಿರ್ಮಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಸ್ ನಿಲ್ದಾಣದ ನೀಲಿ ನಕ್ಷೆ ಹಾಗೂ ಅಂದಾಜು ಪಟ್ಟಿ ತಯಾರಿಸಲಾಗಿದೆಯೇ;

ಇ) ಬಸ್ ನಿಲ್ದಾಣದ ಕಟ್ಟಡದ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಆರ್.ಅಶೋಕ (ಸಾರಿಗೆ ಸಚಿವರು) :

ಅ) ಬಂದಿದೆ.

ಆ) ನೂತನ ಬಸ್‌ನಿಲ್ದಾಣವನ್ನು ಖಾಸಗಿ ಸಹಭಾಗಿತ್ವ ಯೋಜನೆ (ಪಿ.ಪಿ.ಪಿ.) ಅಡಿಯಲ್ಲಿ ನಿರ್ಮಿಸಲು, ಕರ್ನಾಟಕ ರಾಜ್ಯ ಮೂಲಭೂತ ಬಂಡವಾಳ ಮತ್ತು ಅಭಿವೃದ್ಧಿ ನಿಗಮ ಹಾಗೂ ಐ.ಎಲ್. & ಎಫ್.ಎನ್. ಸಹಯೋಗಿತ್ವದ ನೋಡಲ್ ಏಜನ್ಸಿಯಿಂದ ಕೆ.ಐ.ಪಿ.ಡಿ.ಸಿ.ಗೆ ವಹಿಸಲು